ದಿನಾಂಕಃ **21-03-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು :- ಆರೋಪಿ ಪರ ವಕೀಲರಿಂದ :-

ದಿಃ 05-02-2021 ರಂದು ಸಂಜೆ 05-00 ಗಂಟೆ ಸಮಯದಲ್ಲಿನಮ್ಮ ಜಮೀನಿನಲ್ಲಿ ಕಲ್ಲು ಹಾಕಿದ ವಿಚಾರದಲ್ಲಿ ನನ್ನ ಮತ್ತು ಆರೋಪಿತರ ನಡುವೆ ಯಾವುದೇ ಜಗಳ ಆಗಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನಗೆ ಅವಾಚ್ಯ ಶಬ್ಧಗಳಿಂದ ಬೈದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನಗೆ ಯಾವುದೇ ಕೊಲೆ ಬೆದರಿಕೆಯನ್ನು ಹಾಕಿಲ್ಲ ಎಂದರೆ ಸರಿಯಲ್ಲ. 2 ನೇ ಆರೋಪಿಯು ನನಗೆ ಕುಡುಗೋಲಿನಿಂದ ಮತ್ತು 1 ನೇ ಆರೋಪಿ ಚಾಸಾ-5 ಮತ್ತು 8 ರವರಿಗೆ ಕಾಡುಕೋಲಿನಿಂದ ಹೊಡೆದಿಲ್ಲ ಮತ್ತು ಯಾವುದೇ ಹಲ್ಲೆಯನ್ನು ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನಗೆ ಮತ್ತು ಚಾಸಾ-5 ಮತ್ತು 8 ರವರಿಗೆ ಕೊಲೆ ಬೆದರಿಕೆಯನ್ನು ಹಾಕಿಲ್ಲ ಎಂದರೆ ಸರಿಯಲ್ಲ. ಚಾಸಾ-4,6 ಮತ್ತು 7 ರವರು ಜಗಳವನ್ನು ಬಿಡಿಸಿಲ್ಲ ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ-5 ರವರು ಹೊನ್ನಾಳಿ ಸರ್ಕಾರಿ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಪೊಲೀಸರು ನಾನು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-2 ಮತ್ತು 3 ರವರ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿಲ್ಲ, ಕಚ್ಚ ನಕಾಶೆಯನ್ನು ತಯಾರಿಸಿಲ್ಲ ಮತ್ತು ಛಾಯಾಚಿತ್ರಗಳನ್ನು ತೆಗೆದಿಲ್ಲ ಮತ್ತು ಮು.ಮಾ.1 ಮತ್ತು 2 ನ್ನು ನನ್ನ ಸಮಕ್ಷಮ ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತರು ನನ್ನ ಜೊತೆ ಜಗಳವನ್ನು 5-00 ಗಂಟೆಗೆ ಶುರುಮಾಡಿ 05-10 ಗಂಟೆ ಸಮಯದಲ್ಲಿ ಮುಗಿದಿರುತ್ತದೆ. ಆರೋಪಿತರ ಜಮೀನು ನಮ್ಮ ಜಮೀನಿನ ದಕ್ಷಿಣ ಭಾಗಕ್ಕೆ ಇರುತ್ತದೆ. ಆರೋಪಿತರು ನಮ್ಮ ಜಮೀನಿನಲ್ಲಿ ಯಾವುದೇ ಕಲ್ಲನ್ನು ಹಾಕಿಲ್ಲ ಎಂದರೆ ಸರಿಯಲ್ಲ. ನಾನು ವಕೀಲ ವೃತ್ತಿಯನ್ನು ಮಾಡುತ್ತಿದ್ದೇನೆ. ನಾನು ವಕೀಲರಾಗಿದ್ದರಿಂದ ದೂರನ್ನು ಯಾವ ರೀತಿ ತಯಾರಿಸಬೇಕು ಎಂಬುದರ ಬಗ್ಗೆ ನನಗೆ

ಜ್ಞಾನ ಇದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಆರೋಪಿತರು ನನಗೆ ಹಲ್ಲೆ ಮಾಡಿದ್ದರಿಂದ ದೂರನ್ನು ಸಲ್ಲಿಸಿದ್ದೇನೆ ಎಂದು ನುಡಿಯುತ್ತಾರೆ. ಆರೋಪಿತರು ನಮ್ಮ ಜಮೀನಿನ ದಕ್ಷಿಣ ಭಾಗದಲ್ಲಿ ಇರುವುದರಿಂದ ಅವರನ್ನು ಹೆದರಿಸುವ ಉದ್ದೇಶದಿಂದ ಸುಳ್ಳು ದೂರನ್ನು ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ-5 ರವರು ಇಬ್ಬರೂ ಸ್ವತಃ ಬೈಕ್ ನಿಂದ ಕೆಳಗೆ ಬಿದ್ದು ನೋವನ್ನು ಮಾಡಿಕೊಂಡಿರುತ್ತೇವೆ ವಿನಃ ಆರೋಪಿತರು ನಮಗೆ ಯಾವುದೇ ಹಲ್ಲೆಯನ್ನು ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ದೂರನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.